158ನೇ ಕ್ರಮ (113)
4ಕಕ
31/03/26

# ಕರ್ನಾಟಕ ವಿಧಾನ ಪರಿಷತ್ತು

**ಮಾನ್ಯ ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ. ನಾಗರಾಜು ರವರು, ನಿಯಮ-72ರ ಮೇರೆಗೆ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಹೇಳಿಕೆ.**

**ಸೂಚನೆ:** ಗೊಲ್ಲರಹಟ್ಟಿಗಳಲ್ಲಿ ವಾಸಿಸುತ್ತಿರುವ ಕಾಡುಗೊಲ್ಲರು-ಅಡವಿಗೊಲ್ಲರು-ಹಟ್ಟಿಗೊಲ್ಲರು ಸಾಮಾಜಿಕವಾಗಿ-ಶೈಕ್ಷಣಿಕವಾಗಿ-ಆರ್ಥಿಕವಾಗಿ/ರಾಜಕೀಯವಾಗಿ ಅತೀ ಹಿಂದುಳಿದ ವರ್ಗಗಳಿಗೆ ಸೇರಿರುವ ಸಮುದಾಯದವರಾಗಿರುತ್ತಾರೆ. ಈ ಗೊಲ್ಲರಹಟ್ಟಿಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೇ ಜನರು ಪರದಾಡುವಂತಾಗಿರುವುದರಿಂದ ಗೊಲ್ಲರಹಟ್ಟಿಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು ಮತ್ತು ಕಾಡುಗೊಲ್ಲ ಸಮುದಾಯವು ರಾಜಕೀಯವಾಗಿ ಹಿಂದುಳಿದ ಬುಡಕಟ್ಟು ಜನಾಂಗವಾಗಿದ್ದು, ಕಾಡುಗೊಲ್ಲರಿಗೆ ಪ್ರತ್ಯೇಕ ಜಾತಿ ಪ್ರಮಾಣ ಪತ್ರವನ್ನು ನೀಡಿದ್ದರೂ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಕಾಡುಗೊಲ್ಲ ಸಮುದಾಯದ ಅಭ್ಯರ್ಥಿಗಳು ಸ್ಪರ್ಧಿಸಲು ಮೀಸಲಾತಿಯಿಂದ ವಂಚಿತರಾಗಿರುತ್ತಾರೆ. ಆದ್ದರಿಂದ ಕಾಡುಗೊಲ್ಲ ಸಮುದಾಯದ ಅಭ್ಯರ್ಥಿಗಳಿಗೆ ಸ್ಥಳೀಯ ಸಂಸ್ಥೆಗಳ ಚುನಾವಣೆಗಳಲ್ಲಿ ಹಿಂದುಳಿದ ವರ್ಗಗಳು ಸ್ಪರ್ಧಿಸುವ ಪಟ್ಟಿಯಲ್ಲಿ ರಾಜಕೀಯ ಮೀಸಲಾತಿ ನೀಡುವ ಕುರಿತು ಚರ್ಚಿಸಲು ನಿಯಮ – 72 ರಲ್ಲಿ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:** ರಾಜ್ಯದಲ್ಲಿರುವ ಗೊಲ್ಲರಹಟ್ಟಿ ಗ್ರಾಮಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಇಲಾಖೆಯಲ್ಲಿ ಗೊಲ್ಲರ ಹಟ್ಟಿ ಗ್ರಾಮಗಳಿಗಾಗಿಯೇ ಪ್ರತ್ಯೇಕ ಯೋಜನೆಗಳು ಇರುವುದಿಲ್ಲ. ಗ್ರಾಮ ಪಂಚಾಯತಿಗಳು ಕೇಂದ್ರ ಹಾಗೂ ರಾಜ್ಯ ಹಣಕಾಸು ಆಯೋಗದ ಅನುದಾನ ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಲಭ್ಯವಾಗುವ ಅನುದಾನಕ್ಕೆ ತಕ್ಕಂತೆ ಗ್ರಾಮ ಸಭೆಗಳಲ್ಲಿ ಗುರುತಿಸುವಂತಹ ಮೂಲಭೂತ ಸೌಕರ್ಯಗಳನ್ನು ಸೃಜಿಸುವ ಕಾಮಗಾರಿಗಳನ್ನು ಕೈಗೊಂಡು ಕ್ರಮವಹಿಸಲಾಗುತ್ತಿದೆ ಹಾಗೂ ಕೇಂದ್ರ ಜಲ ಜೀವನ್ ಮಿಷನ್ (Jal Jeevan Mission) ಯೋಜನೆಯಡಿ ಎಲ್ಲಾ ಗ್ರಾಮಗಳಿಗೂ ಸುಸ್ಥಿರ ನೀರಿನ ಸಂಪನ್ಮೂಲವನ್ನು ಒದಗಿಸಲು ಆದ್ಯತೆಯ ಮೇರೆಗೆ ಕುಡಿಯುವ ನೀರಿನ ಸಂಪರ್ಕ ಕಲ್ಪಿಸಲಾಗುತ್ತಿದೆ.

ರಾಜ್ಯದ ಹಿಂದುಳಿದ ವರ್ಗಗಳ ಆಯೋಗ/ಹಿಂದುಳಿದ ವರ್ಗಗಳ ಇಲಾಖೆ ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿರುವ ಹಿಂದುಳಿದ ಜಾತಿಗಳ ಅಭ್ಯರ್ಥಿಗಳಿಗೆ ಸ್ಥಳೀಯ ಸಂಸ್ಥೆಗಳಾದ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳ ಚುನಾವಣೆಯಲ್ಲಿ ಸ್ಪರ್ಧಿಸಲು ಕರ್ನಾಟಕ ಗ್ರಾಮ್ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 5,123 ಮತ್ತು 162ರಲ್ಲಿ ಕ್ರಮವಾಗಿ ಅವಕಾಶ ಕಲ್ಪಿಸಲಾಗಿದೆ. ಹಿಂದುಳಿದ ವರ್ಗಗಳ ಇಲಾಖೆಯು

ಅಧಿಸೂಚಿಸಿರುವ ಹಿಂದುಳಿದ ವರ್ಗಗಳ ಜಾತಿಗಳನ್ನು ಸ್ಥಳೀಯ ಸಂಸ್ಥೆಗಳ ಚುನಾವಣೆಯ ಉದ್ದೇಶಕ್ಕಾಗಿ ಎರಡು ಪ್ರವರ್ಗಗಳಲ್ಲಿ ಅಂದರೆ, ಪ್ರವರ್ಗ-ಎ ಹಾಗೂ ಪ್ರವರ್ಗ-ಬಿ ರಡಿ ಗುರುತಿಸಿ ಸರ್ಕಾರ ಅಧಿಸೂಚನೆ ಸಂಖ್ಯೆ: RDP 5 ZPS 1995 Dated:13.01.1995ರಲ್ಲಿ ಅಧಿಸೂಚಿಸಿದೆ. ಈ ಮೀಸಲಾತಿ ಪ್ರಮಾಣದ ಶೇಕಡ 80ರಷ್ಟು ಸ್ಥಾನಗಳನ್ನು "ಪ್ರವರ್ಗ-ಎ" ಜಾತಿಗಳಿಗೆ ಹಾಗೂ ಇನ್ನುಳಿದ ಶೇಕಡ 20ರಷ್ಟು ಸ್ಥಾನಗಳನ್ನು "ಪ್ರವರ್ಗ-ಬಿ" ಜಾತಿಗಳಿಗೆ ಮೀಸಲಿರಿಸಿದೆ. ಪ್ರವರ್ಗ-ಎ ರಡಿಯ ಕ್ರಮ ಸಂಖ್ಯೆ:80(e)ರಲ್ಲಿ "ಅಡವಿಗೊಲ್ಲ" ಜಾತಿಯನ್ನು ಸೇರಿಸಲಾಗಿರುತ್ತದೆ. ಇದರ ಜೊತೆಗೆ ಕ್ರಮ ಸಂಖ್ಯೆ:80(a)ರಲ್ಲಿ "ಗೊಲ್ಲ" ಜಾತಿಯನ್ನು ಸೇರಿಸಲಾಗಿರುತ್ತದೆ. ಇವುಗಳ ಜೊತೆಗೆ "ಕಾಡುಗೊಲ್ಲ" ಮತ್ತು "ಹಟ್ಟಿಗೊಲ್ಲ" ಜಾತಿಗಳನ್ನು ಪ್ರವರ್ಗ-ಎ ರಡಿ ಸೇರಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ಕಡತ ಸಂಖ್ಯೆ:** ಗ್ರಾಅಪಂರಾ 76 ಜಿಪಸ 2026

(ಪ್ರಿಯಾಂಕ್ ಖರ್ಗೆ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ
ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು